File No.AGRI-ACT-20/2019-AGRI_PLAN_A-AGRICULTURE Secretariat

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೃಷಿ ಆಯುಕ್ತಾಲಯದ ಆವರಣದಲ್ಲಿನ ಕರ್ನಾಟಕ ಅಗ್ರಿ ಮ್ಯೂಸಿಯಂ ಕಟ್ಟಡದ ಸಭಾಂಗಣದ ಒಳಾಂಗಣ ವಿನ್ಯಾಸ ಕಾಮಗಾರಿ ಕೈಗೊಳ್ಳಲು ರೂ.652.00 ಲಕ್ಷಗಳ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಪತ್ರ ಸಂ. ಕೃಇ 38 ಕೃಇಕ 2014 ದಿನಾಂಕ 03.06.2014.
2. ಸರ್ಕಾರದ ಪತ್ರ ಸಂ. ಕೃಇ 214 ಕೃಇಕ 2017 ದಿನಾಂಕ 23.03.2018.
3. ಕೃಷಿ ಆಯುಕ್ತಾಲಯದ ಪತ್ರ ಸಂ. ಕಾಪಾಲ/ಕೃಇ/ಕ.ಕೃವಿ.ಮ್ಯೂಸಿಯಂ/ಇಂಟೀರಿಯರ್ ವರ್ಕ್ಸ್/2019-20 ದಿನಾಂಕ 16.05.2019.

ಪ್ರಸ್ತಾವನೆ:

ಮೇಲೆ (1) ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ, ಕೃಷಿ ಆಯುಕ್ತರವರಿಗೆ ದಿನಾಂಕ 31.07.2012 ರಂದು RKVY ಯೋಜನೆಯಡಿ ನಡೆದ State Level Sanctioning Committee ಸಭೆಯಲ್ಲಿ ಕೃಷಿ ಇಲಾಖೆಯ ಕೇಂದ್ರ ಕಛೇರಿ ಆವರಣದಲ್ಲಿ ಕರ್ನಾಟಕ ಕೃಷಿ ವಿಜ್ಞಾನ ಮ್ಯೂಸಿಯಂ ಕಟ್ಟಡಕ್ಕೆ ರೂ.5.00 ಕೋಟಿ ಮಂಜೂರಾತಿ ನೀಡಲಾಗಿದ್ದು, ಸದರಿ ಕಟ್ಟಡದ ಒಳಾಂಗಣ ವಿನ್ಯಾಸದ ಅಂದಾಜು ಮೊತ್ತ ರೂ.4,78,25,000.00 ಗಳ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ಎಂದು ನಿರ್ದೇಶಿಸಲಾಗಿದೆ.

ಮೇಲೆ (2) ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ, ಕೃಷಿ ಆಯುಕ್ತರವರಿಗೆ ಕರ್ನಾಟಕ ಕೃಷಿ ವಿಜ್ಞಾನ ಮ್ಯೂಸಿಯಂ ಕಟ್ಟಡ ಕಾಮಗಾರಿ ತಗಲುವ ಖರ್ಚನ್ನು RKVY ಯೋಜನೆಯಡಿ ಬಿಡುಗಡೆಯಾಗಿ SAMA ಉಳಿತಾಯ ಖಾತೆಯಲ್ಲಿರುವ ಅನುದಾನದಿಂದ ಭರಿಸುವ ಹಿನ್ನಲೆಯಲ್ಲಿ ಕೃಷಿ ಆಯುಕ್ತರ ಅಧ್ಯಕ್ಷತೆಯಲ್ಲಿ ದಿನಾಂಕ 10.07.2018 ರಂದು ನಡೆಯಲಾಗಿದ್ದ ಸಭೆಯಲ್ಲಿ ಉದ್ದೇಶಿಸಲಾದಂತೆ ಕಾಮಗಾರಿಯನ್ನು ತುರ್ತಾಗಿ ಕೈಗೊಂಡು ಪೂರ್ಣಗೊಳಿಸುವ ಉದ್ದೇಶದಿಂದ KRIDL ಸಂಸ್ಥೆ ಮೂಲಕ ನಿಯಮಾನುಸಾರ ಕ್ರಮಕೈಗೊಳ್ಳಲು ಅಭ್ಯಂತರವಿಲ್ಲವೆಂದು ತಿಳಿಸಲಾಗಿದೆ.

ಮೇಲೆ (3) ರಲ್ಲಿ ಓದಲಾದ ಕೃಷಿ ಆಯುಕ್ತರವರ ಪ್ರಸ್ತಾವನೆಯಲ್ಲಿ, ಕೃಷಿ ಆಯುಕ್ತಾಲಯದ ಆವರಣದಲ್ಲಿನ ಕರ್ನಾಟಕ ಅಗ್ರಿ ಮ್ಯೂಸಿಯಂ ಕಟ್ಟಡದ ಸಭಾಂಗಣದ ಒಳಾಂಗಣ ವಿನ್ಯಾಸ ಕಾಮಗಾರಿಗೆ ಸಂಬಂಧಿಸಿದಂತೆ Providing Architectural Structural Design, Drawing, detailed Estimates supervision and quality auditing ಇತ್ಯಾದಿಗಳನ್ನು ಕೈಗೊಳ್ಳಲು E-Procurement ಮೂಲಕ M/s Design Transit ಇವರನ್ನು Project Management Consultant ಎಂದು ನೇಮಿಸಿಕೊಳ್ಳಲಾಗಿತ್ತು. ಈ ಸಂಸ್ಥೆಯು ಮಾಡಿಕೊಂಡ ಕರಾರಿನನ್ವಯ ಕಾರ್ಯನಿರ್ವಹಿಸಲು ವಿಫಲವಾದ ಕಾರಣ ಸದರಿ ಸಂಸ್ಥೆಯವರೊಡನೆ ಮಾಡಿಕೊಂಡ ಕರಾರನ್ನು ರದ್ದುಗೊಳಿಸಲಾಗಿರುತ್ತದೆ. ವಿದ್ಯುತ್ ಮತ್ತು ಹವಾನಿಯಂತ್ರಣ ಸ್ಥಾವರ ಇತ್ಯಾದಿ ವ್ಯವಸ್ಥೆಗಳನ್ನು ಒಳಗೊಂಡ ವಿಶೇಷ ಮಾದರಿಯ ಕಾಮಗಾರಿಯನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸುವ ಉದ್ದೇಶದಿಂದ KRIDL ಸಂಸ್ಥೆ ಮೂಲಕ ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗಿತ್ತು. ಆದರೆ, ಮಾನ್ಯ ಕೃಷಿ ಸಚಿವರು ಈ ಕಾಮಗಾರಿಯನ್ನು KRIDL ಸಂಸ್ಥೆಗೆ ವಹಿಸುವುದು ಸೂಕ್ತವಲ್ಲ ಅದರ ಸರ್ವಿಸಿಂಗ್ ಛಾರ್ಜಸ್ ಶೇ.7 ಕ್ಕಿಂತ ಹೆಚ್ಚಾಗಿರುತ್ತದೆ. ಆದ್ದರಿಂದ ಈ ಗುತ್ತಿಗೆಯನ್ನು ಕರ್ನಾಟಕ ಗೃಹ ಮಂಡಳಿಗೆ ನೀಡಲು ನಿಯಮಾನುಸಾರ ಸೂಕ್ತ ಕ್ರಮ ವಹಿಸುವಂತೆ ಸೂಚಿಸಿರುವ ಪ್ರಯುಕ್ತ ಕರ್ನಾಟಕ ಅಗ್ರಿ ಮ್ಯೂಸಿಯಂ ಕಟ್ಟಡದ ಸಭಾಂಗಣದ ಒಳಾಂಗಣ ವಿನ್ಯಾಸ ಕಾಮಗಾರಿಗೆ ಕರ್ನಾಟಕ ಗೃಹ ಮಂಡಳಿಯವರು ರೂ.652.00 ಲಕ್ಷಗಳ ವೆಚ್ಚದಲ್ಲಿ ಅಂದಾಜು ಪಟ್ಟಿಯನ್ನು ಸಲ್ಲಿಸಿದ್ದು, ಇವರ ಮೂಲಕ ಅನುಷ್ಠಾನಗೊಳಿಸಲು RKVY ಯೋಜನೆಯಡಿ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಮೇಲ್ಕಂಡ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕುಷವಾಗಿ ಪರಿಶೀಲಿಸಿ, ಕರ್ನಾಟಕ ಅಗ್ರಿ ಮ್ಯೂಸಿಯಂ ಕಟ್ಟಡದ ಸಭಾಂಗಣದ ಒಳಾಂಗಣ ವಿನ್ಯಾಸ ಕಾಮಗಾರಿಯನ್ನು KRIDL ಸಂಸ್ಥೆ ಮೂಲಕ ಅನುಷ್ಠಾನಗೊಳಿಸಲು ಓದಲಾದ (2)ರ ಪತ್ರದಲ್ಲಿ ನಿರ್ದೇಶನವನ್ನು ನೀಡಲಾಗಿದ್ದು, ಈ ಸಂಸ್ಥೆಯ ಸರ್ವಿಸಿಂಗ್ ಛಾರ್ಜಸ್ ಶೇ.7 ಕ್ಕಿಂತ ಹೆಚ್ಚಾಗಿರುವುದರಿಂದ ಸದರಿ ಸಂಸ್ಥೆಗೆ ನೀಡಲಾಗಿದ್ದ ಕಾಮಗಾರಿಯ ಆಡಳಿತಾತ್ಮಕ ಅನುಮೋದನೆಯನ್ನು ಹಿಂಪಡೆದು ಪ್ರಸ್ತುತ ಕರ್ನಾಟಕ ಅಗ್ರಿ ಮ್ಯೂಸಿಯಂ ಕಟ್ಟಡದ ಸಭಾಂಗಣದ ಒಳಾಂಗಣ ವಿನ್ಯಾಸ ಕಾಮಗಾರಿಯನ್ನು ರೂ.652.00 ಲಕ್ಷಗಳ ವೆಚ್ಚದಲ್ಲಿ ಕರ್ನಾಟಕ ಗೃಹ ಮಂಡಳಿ (KHB), ಬೆಂಗಳೂರು ಇವರ ಮೂಲಕ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆಯನ್ನು ನೀಡಲು ತೀರ್ಮಾನಿಸಿ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರಿ ಆದೇಶ ಸಂಖ್ಯೆ: AGRI-ACT-20/2019 ಬೆಂಗಳೂರು, ದಿನಾಂಕ 13.06.2019</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಕರ್ನಾಟಕ ಅಗ್ರಿ ಮ್ಯೂಸಿಯಂ ಕಟ್ಟಡದ ಸಭಾಂಗಣದ ಒಳಾಂಗಣ ವಿನ್ಯಾಸ ಕಾಮಗಾರಿಯನ್ನು KRIDL ಸಂಸ್ಥೆ ಮೂಲಕ ಅನುಷ್ಠಾನಗೊಳಿಸಲು ನೀಡಲಾಗಿದ್ದ ಆಡಳಿತಾತ್ಮಕ ಅನುಮೋದನೆಯನ್ನು ಹಿಂಪಡೆದು, ಕರ್ನಾಟಕ ಅಗ್ರಿ ಮ್ಯೂಸಿಯಂ ಕಟ್ಟಡದ ಸಭಾಂಗಣದ ಒಳಾಂಗಣ ವಿನ್ಯಾಸ ಕಾಮಗಾರಿಯನ್ನು ರೂ.652.00 ಲಕ್ಷಗಳ (ಆರು ನೂರ ಐವತ್ತೆರಡು ಲಕ್ಷ ರೂಪಾಯಿಗಳು ಮಾತ್ರ) ವೆಚ್ಚದಲ್ಲಿ ಕರ್ನಾಟಕ ಗೃಹ ಮಂಡಳಿ (KHB), ಬೆಂಗಳೂರು ಇವರ ಮೂಲಕ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆಯನ್ನು ನೀಡಿ ಆದೇಶಿಸಿದೆ.

ಈ ಕಾಮಗಾರಿಯನ್ನು ಕಡ್ಡಾಯವಾಗಿ KTPP ಕಾಯ್ದೆ ಮತ್ತು ಅದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ವಯ ಮತ್ತು RKVY ಮಾರ್ಗಸೂಚನೆಗಳನ್ನು ಪಾಲಿಸಿ ಅನುಷ್ಠಾನಗೊಳಿಸತಕ್ಕದ್ದು.

ಸದರಿ ಆದೇಶವನ್ನು ಸರ್ಕಾರದ ಆದೇಶ ಸಂ. ಎಫ್.ಡಿ 1 ಟಿ.ಎಫ್.ಪಿ 2019 ದಿನಾಂಕ 03.04.2019ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಲಾದ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

B S Nagarathnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)

13/6

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು–560001.
2. ಪ್ರಧಾನ ಮಹಾಲೇಖಪಾಲರು (ಇ&ಆರ್ ಎಸ್ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು–560001.
3. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಬೆಂಗಳೂರು
4. ಆಯುಕ್ತರು / ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು

5. ಮುಖ್ಯ ಅಭಿಯಂತರು, ಕರ್ನಾಟಕ ಗೃಹ ಮಂಡಳಿ, ಬೆಂಗಳೂರು
6. ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ), ಬೆಂಗಳೂರು
7. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಇಲಾಖೆ, ಕೃಷಿ ಇಲಾಖೆ
8. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು
9. ನಿರ್ದೇಶಕರು, ಟಿ.ಎನ್.ಎಂ.ಸಿ, ಖನಿಜ ಭವನ, ಬೆಂಗಳೂರು
10. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು
11. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ–4), ಬೆಂಗಳೂರು
12. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು
13. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು
14. ಸರ್ಕಾರದ ಉಪ ಕಾರ್ಯದರ್ಶಿ–1&2 ರವರ ಆಪ್ತ ಸಹಾಯಕರು, ಕೃಷಿ ಇಲಾಖೆ
15. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.